ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: ಕರ್ನಾಟಕ ವಿಧಾನ ಸಭೆ ಸಚಿವಾಲಯ

ಪತ್ರಿಕೆಯ ಹೆಸರು : NAME OF THE NEWS PAPER: ವಿಜಯವಾಣಿ    ದಿನಾಂಕ : DATE : 18/10/2019

## 8.58 ಕೋಟಿ ರೂ. ಆಸ್ತಿ ಹೊಂದಿರುವ ಎಸ್. ಮೂರ್ತಿ

# ₹5.58 ಕೋಟಿ ಅಕ್ರಮ ಆಸ್ತಿ

ಬೆಂಗಳೂರು: ಅಮಾನತಿನಲ್ಲಿರುವ ವಿಧಾನಸಭೆ ಸಚಿವಾಲಯದ ಕಾರ್ಯದರ್ಶಿ ಎಸ್. ಮೂರ್ತಿ 5.58 ಕೋಟಿ ರೂ. ಅಕ್ರಮವಾಗಿ ಆಸ್ತಿ ಗಳಿಸಿರುವುದು ಎಸಿಬಿ ತನಿಖೆಯಲ್ಲಿ ಬೆಳಕಿಗೆ ಬಂದಿದೆ.

ಭ್ರಷ್ಟಾಚಾರದಲ್ಲಿ ತೊಡಗಿ ಅಕ್ರಮವಾಗಿ ಕೋಟ್ಯಂತರ ರೂ. ಸಂಪಾದಿಸಿದ್ದ ಎಸ್. ಮೂರ್ತಿ ವಿರುದ್ಧ ಈ ಹಿಂದೆ ಸಾಕಷ್ಟು ಆರೋಪಗಳು ಕೇಳಿ ಬಂದಿತ್ತು. ಅ.3ರಂದು ಎಸಿಬಿ ಅಧಿಕಾರಿಗಳು ಮೂರ್ತಿಗೆ ಸೇರಿದ ಸದಾಶಿವನಗರ, ಜಾಲಹಳ್ಳಿ ಕ್ರಾಸ್ ರಸ್ತೆಯಲ್ಲಿರುವ ಮನೆ, ಆರ್.ಟಿ. ನಗರದಲ್ಲಿರುವ ಮನೆ ಹಾಗೂ ಫ್ಲ್ಯಾಟ್, ಕೊಡಗಿನಲ್ಲಿರುವ ಕಾಫಿ ತೋಟದ ಮೇಲೆ ದಾಳಿ ನಡೆಸಿದಾಗ ಅಕ್ರಮ ಆಸ್ತಿಗೆ ಸಂಬಂಧಿಸಿದ ದಾಖಲೆಗಳು ಪತ್ತೆಯಾಗಿದ್ದವು. ಪರಿಶೀಲಿಸಿದಾಗ ಮೂರ್ತಿ 5.58 ಕೋಟಿ ರೂ. ಮೌಲ್ಯದ ಅಕ್ರಮ ಆಸ್ತಿ ಹೊಂದಿರುವುದು ಪತ್ತೆಯಾಗಿದೆ. ಒಟ್ಟು 8,58,18,000 ರೂ. ಆಸ್ತಿ ಹೊಂದಿದ್ದು, ಇದರಲ್ಲಿ 50 ಲಕ್ಷ ರೂ. ಖರ್ಚು ತೋರಿಸಿದ್ದಾರೆ.



ವಿವಿಧ ಮೂಲಗಳಿಂದ 3.50 ಕೋಟಿ ರೂ. ಆದಾಯ ಹೊಂದಿದ್ದು, ಪತ್ನಿ ಪೂರ್ಣಿಮಾ ಹಾಗೂ ಪುತ್ರ ಮಧುಸೂದನ್ ಕಡೆಯಿಂದ 20 ಲಕ್ಷ ರೂ., ಜಮೀನಿನ ಮಾರಾಟದಿಂದ 30 ಲಕ್ಷ ರೂ. ಆದಾಯ ಬಂದಿದೆ. ಅವರ ಕುಟುಂಬ ಸದಸ್ಯರ ಹೆಸರಿನಲ್ಲಿ ವಿವಿಧ ಬ್ಯಾಂಕ್‌ಗಳಿಂದ 2 ಕೋಟಿ ರೂ. ಸಾಲ ಪಡೆದಿದ್ದಾರೆ. ಮೂರ್ತಿ ಶೇ.159.48ಕ್ಕೂ ಹೆಚ್ಚಿನ ಆಸ್ತಿ ಹೊಂದಿರುವುದು ಎಸಿಬಿ ತನಿಖೆಯಲ್ಲಿ ದೃಢಪಟ್ಟಿದೆ.

### ಸಚಿವಾಲಯ ಕಾರ್ಯದರ್ಶಿಗೆ ಮಾಹಿತಿ

ಈಗಾಗಲೇ ಎಸಿಬಿ ಅಧಿಕಾರಿಗಳು ವಿಧಾನಸಭೆ ಸಚಿವಾಲಯದ ಕಾರ್ಯದರ್ಶಿಗಳಿಗೆ ಮೂರ್ತಿ ಅಕ್ರಮದ ಬಗ್ಗೆ ಮಾಹಿತಿ ನೀಡಿದ್ದಾರೆ. ಮೂರ್ತಿ ಅವರನ್ನು ಅಮಾನತ್ತಿನಲ್ಲಿರಿಸುವುದರ ಜತೆಗೆ ಲೀನ್ ಬದಲಾಯಿಸುವಂತೆ ವಿನಂತಿಸಿದ್ದಾರೆ ಎನ್ನಲಾಗಿದೆ.

ಗುಪ್ತವಾಗಿ ಹೂಡಿಕೆ ಮಾಡಿರುವುದು ಹಾಗೂ ಆಸ್ತಿಗಳ ಕುರಿತಂತೆ ಇನ್ನೂ ಹಲವು ಮೂಲಗಳಿಂದ ಮಾಹಿತಿ ಬರಬೇಕಿದೆ. ಮುಂದಿನ ದಿನಗಳಲ್ಲಿ ಅಕ್ರಮ ಆಸ್ತಿ ಮೌಲ್ಯ ಇನ್ನಷ್ಟು ಹೆಚ್ಚಳವಾಗುವ ಸಾಧ್ಯತೆಗಳಿವೆ ಎಂದು ಎಸಿಬಿ ಮೂಲಗಳು ತಿಳಿಸಿವೆ.

**ಸಾಕ್ಷ್ಯಕ್ಕಾಗಿ ಹುಡುಕಾಟ:** ಮೂರ್ತಿಗೆ ಬರುತ್ತಿದ್ದ ಆದಾಯದ ಮೂಲಗಳು ಯಾವುದು ಎಂಬ ಬಗ್ಗೆ ತನಿಖೆ ನಡೆಸಬೇಕಿದೆ. 5.58 ಕೋಟಿ ರೂ. ಅಕ್ರಮ ಆಸ್ತಿ ಹೇಗೆ ಗಳಿಸಿದ್ದಾರೆ ಎಂಬ ಬಗ್ಗೆ ಎಲ್ಲ ಆಯಾಮಗಳಲ್ಲೂ ತನಿಖೆ ನಡೆಯುತ್ತಿದೆ. ಅಧಿಕಾರ ದುರ್ಬಳಕೆ ಮಾಡಿಕೊಂಡು ಕೋಟ್ಯಂತರ ರೂ. ಆಸ್ತಿ ಸಂಪಾದನೆ ಮಾಡಿರುವ ಸುಳಿವು ಸಿಕ್ಕಿದ್ದು, ಸೂಕ್ತ ಸಾಕ್ಷ್ಯಕ್ಕಾಗಿ ಹುಡುಕಾಟ ನಡೆಸಲಾಗುತ್ತಿದೆ ಎಂದು ಎಸಿಬಿ ಮೂಲಗಳು ತಿಳಿಸಿವೆ.